# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನಂ.ಸ.ಕಾ.ನಿ.ಅ./ಕೋ.ಉ.ವಿ/ಪಿ.ಆರ್/27/2020-21

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ,
ಕೋರಮಂಗಲ ಉಪವಿಭಾಗ,
ಪಾಲಿಕೆ ಕಟ್ಟಡಗಳು, 2ನೇ ಅಡ್ಡರಸ್ತೆ,
5ನೇ ಬ್ಲಾಕ್, ಕೋರಮಂಗಲ,
ಬೆಂಗಳೂರು. ದಿನಾಂಕ:26-02-2021

**-: ಸಭೆ ತಿಳುವಳಿಕೆ ಪತ್ರ :-**

ವಿಷಯ :- ಆಡುಗೋಡಿ ವಾರ್ಡ್ ಸಂಖ್ಯೆ.147ರ ವಾರ್ಡ್ ಮಟ್ಟದ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಿರುವ ಬಗ್ಗೆ.

ಉಲ್ಲೇಖ:- ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಚೇರಿ ಆದೇಶದ ಪತ್ರ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ:21-09-2020.

* * * * *

ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಆದೇಶದ ರೀತ್ಯಾ ವಾರ್ಡ್ ಸಂಖ್ಯೆ.147(ಆಡುಗೋಡಿ) ವಾರ್ಡ್ ಸಮಿತಿ ಸಭೆಯನ್ನು ನೋಡಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ದಿನಾಂಕ:01.03.2021 ರಂದು ಬೆಳಗ್ಗೆ 10.00 ಗಂಟೆಗೆ ವಾರ್ಡ್ ಸಮಿತಿ ಸಭೆಯು ಬಿ.ಬಿ.ಎಂ.ಪಿ. ವಾಣಿಜ್ಯ ಸಂಕೀರ್ಣ, ಆಡುಗೋಡಿ, ಹೊಸೂರು ರಸ್ತೆ (ಕಾರ್ಯಪಾಲಕ ಅಭಿಯಂತರರ ಕಛೇರಿ) ಇಲ್ಲಿ ಜರುಗಲಿದ್ದು, ಸದರಿ ಸಭೆಗೆ ವಾರ್ಡ್ ಸಮಿತಿ ಸದಸ್ಯರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ತಪ್ಪದೇ ಹಾಜರಾಗಲು ಕೋರಿದೆ ಹಾಗೂ ಸಭೆಗೆ ಗೈರು ಹಾಜರಾಗುವ ಅಧಿಕಾರಿಗಳ ಹೆಸರನ್ನು ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದು.

<u>ಸಭೆಯಲ್ಲಿ ಚರ್ಚಿಸಬಹುದಾದ ವಿಷಯಗಳು:</u> 1) ಕೋವಿಡ್-19ರ ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ. 2) ಒಂಟಿಮನೆ ನಿರ್ಮಾಣದ ಫಲಾನುಭವಿಗಳ ಆಯ್ಕೆಯ ಬಗ್ಗೆ 3) ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ. 4) ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ. 5) ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ. 6) ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ. 7) ಬೀದಿ ದೀಪಗಳ ನಿರ್ವಹಣೆ ಬಗ್ಗೆ. 8) ವಿದ್ಯುತ್ ಸರಬರಾಜು (ಬೆಸ್ಕಾಂ)ಗೆ ಸಂಬಂಧಿಸಿದ ವಿಷಯದ ಬಗ್ಗೆ ಹಾಗೂ ಇನ್ನಿತರೆ ವಿಷಯಗಳು ಅಧ್ಯಕ್ಷರ ಸೂಚನೆಯಂತೆ.

ಕಾರ್ಯದರ್ಶಿ, ವಾರ್ಡ್ ಸಮಿತಿ
ವಾರ್ಡ್ ಸಂಖ್ಯೆ 147, ಆಡುಗೋಡಿ

ರವರಿಗೆ,
ಸಂಬಂಧಪಟ್ಟ ಸದಸ್ಯರುಗಳು/ಅಧಿಕಾರಿಗಳು
ವಾರ್ಡ್ ವ್ಯಾಪ್ತಿಯ ಬಡಾವಣೆಗಳ ನಿವಾಸಿಗಳಿಗೆ/
ಸಾರ್ವಜನಿಕ ಪ್ರಕಟಣೆ

ಪ್ರತಿಯನ್ನು:-

1. ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಅಧಿಕಾರಿಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್), ಕೋರಮಂಗಲ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
3. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್), ಆಡುಗೋಡಿ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಕೋರಮಂಗಲ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ವಿದ್ಯುತ್ ಸರಬರಾಜು ನಿಗಮ, ಕೋರಮಂಗಲ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಂದಾಯ ಅಧಿಕಾರಿಗಳು, ಕೋರಮಂಗಲ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ, ಬಿ.ಟಿ.ಎಂ.ಲೇಔಟ್ ವಿಭಾಗ, ಆಡುಗೋಡಿ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
8. ಪೊಲೀಸ್ ಇನ್ಸ್‌ಪೆಕ್ಟರ್ (ಟ್ರಾಫಿಕ್), ಆಡುಗೋಡಿ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
9. ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಬಿ.ಬಿ.ಎಂ.ಪಿ (ದಕ್ಷಿಣ), ಜಯನಗರ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
10. ಸಹಾಯಕ ನಿರ್ದೇಶಕರು, ತೋಟಗಾರಿಕೆ, ಬಿ.ಬಿ.ಎಂ.ಪಿ. (ದಕ್ಷಿಣ), ಜಯನಗರ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.

Scanned with CamScanner

Ward Committee Meeting Ward 147 Adugodi

DATE 01 03 2021

| SL NO | Name | Designation | Signature |
| --- | --- | --- | --- |
| 1 | Basavaraj R. Kabade | Chairman | |
| 2 | Manjula [Ex. Corp] | Member | |
| 3 | Sampath [Ex-Corp] | Member | [signature] |
| 4 | A.M. Thyagaraj | Member | [signature] |
| 5 | V. Hemavathy. | Member | |
| 6 | Rathanamma | Member | [signature] |
| 7 | Bhagyalakshmi. S. | Member | |
| 8 | M. Gopal. | Member | [signature] |
| 9 | B.D Nagaraj | Member | [signature] |
| 10 | Porapandiyan | Member | [signature] |
| 11 | Kemparaju | Member | [signature] |
| 12 | Chandrashekar P | Secretary | [signature] |

Scanned with CamScanner

Officials

DATE 01 03 2021

| Sl NO | Name | Designation | Signature |
|---|---|---|---|
| 1. | Md. Shadab Haider | Sr.H.I. BBMP | [signature] |
| 2. | Durgaprasad. | JHI. BBMP | [signature] |
| 3 | S.VIJAY KumAR | TI ARO KML | [signature] |
| 4 | Rudreeh H.K | AE BWSSB | [signature] |
| 5 | venkatashivareddy | JE BESCOM | [signature] |
| 6 | moorthi. A | Marshal | [signature] |

PBC

Scanned with CamScanner

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕೋರಮಂಗಲ ಉಪ-ವಿಭಾಗದ, ಆಡುಗೋಡಿ ವಾರ್ಡ್ ಸಂಖ್ಯೆ-147

## ದಿನಾಂಕ: 01-03-2021 ರಂದು ಮಾರ್ಚ್-2021 ಮಾಹೆಯ

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ಶ್ರೀ ಬಸವರಾಜ್ ಕಬಾಡೆ, ಅಧೀಕ್ಷಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ರವರ ಮೌಖಿಕ ಆದೇಶದಂತೆ, ಶ್ರೀ ಚಂದ್ರಶೇಖರ್ .ಪಿ, ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ 147ರ ರವರ ಅಧ್ಯಕ್ಷತೆಯಲ್ಲಿ ಬಿ.ಬಿ.ಎಂ.ಪಿ ವಾಣಿಜ್ಯ ಸಂಕೀರ್ಣ, (ಕಾರ್ಯಪಾಲಕ ಅಭಿಯಂತರರ ಕಛೇರಿ) ಆಡುಗೋಡಿಯಲ್ಲಿ ದಿನಾಂಕ:01.03.2021 ರಂದು ಬೆಳಗ್ಗೆ 10.00 ಗಂಟೆಗೆ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು:

**ಹಾಜರಿದ್ದ ಸದಸ್ಯರು:-**

1. ಶ್ರೀ ಸಂಪತ್
2. ಶ್ರೀ ಎ.ಎಂ. ತ್ಯಾಗರಾಜ್
3. ಶ್ರೀ ಎಂ. ಗೋಪಾಲ್
4. ಶ್ರೀ ಬಿ.ಡಿ. ನಾಗರಾಜು
5. ಶ್ರೀ ಪಾಂಡಿಯನ್
6. ಶ್ರೀ ಕೆಂಪರಾಜು

**ಹಾಜರಿದ್ದ ಅಧಿಕಾರಿಗಳು:-**

1. ಶ್ರೀ ಚಂದ್ರಶೇಖರ್ .ಪಿ, ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು, ವಾರ್ಡ್-147, ಆಡುಗೋಡಿ
2. ಶ್ರೀ ಎಂ.ಡಿ. ಶಾದಬ್ ಹೈದರ್, ಹಿರಿಯ ಆರೋಗ್ಯ ನಿರೀಕ್ಷಕರು
3. ಶ್ರೀ ದುರ್ಗಾ ಪ್ರಸಾದ್, ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ಎಸ್. ವಿಜಯ ಕುಮಾರ್, ತೆರಿಗೆ ನಿರೀಕ್ಷಕರು
5. ಶ್ರೀ ರುದ್ರೇಶ್ ಹೆಚ್.ಕೆ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ,
6. ಶ್ರೀ ವೆಂಕಟಶಿವರೆಡ್ಡಿ, ಕಿರಿಯ ಅಭಿಯಂತರರು, ಬೆಸ್ಕಾಂ
7. ಶ್ರೀ ಮಾರುತಿ .ಎ, ಮಾರ್ಷಲ್

* * * * *

ಶ್ರೀ ಬಸವರಾಜ್ ಕಬಾಡೆ, ಅಧೀಕ್ಷಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ದಿನಾಂಕ:01.03.2021 ರಂದು 10.00 ಗಂಟೆಗೆ ಸಭೆಯನ್ನು ಏರ್ಪಡಿಸಲಾಗಿತ್ತು. ನೋಡಲ್ ಅಧಿಕಾರಿಗಳಾದ ಶ್ರೀ ಬಸವರಾಜ್ ಕಬಾಡೆ ರವರಿಗೆ ಅನಾರೋಗ್ಯದ ಸಮಸ್ಯೆಯ ಕಾರಣದಿಂದಾಗಿ ವಾರ್ಡ್-147 ರ ಸಮಿತಿ ಸಭೆಯನ್ನು ನೋಡಲ್ ಅಧಿಕಾರಿ ರವರ ಆದೇಶದಂತೆ, ಶ್ರೀ ಚಂದ್ರಶೇಖರ್ .ಪಿ, ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ 147 ರವರ ಅಧ್ಯಕ್ಷತೆಯಲ್ಲಿ ಜರುಗಿತು. ಮೊದಲಿಗೆ ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳನ್ನು ಹಾಗೂ ವಾರ್ಡ್‌ನ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು ಮತ್ತು ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳು, ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲು ತಿಳಿಸಿದರು.



Scanned with CamScanner

ಶ್ರೀ ಬಿ.ಡಿ. ನಾಗರಾಜು ರವರು ಮಾತನಾಡಿ, Culverts ಹಾಗೂ ರಸ್ತೆಚರಂಡಿಗಳಲ್ಲಿ ನೀರು ಸರಿಯಾಗಿ ಹರಿಯುವ ದೃಷ್ಟಿಯಿಂದ ತುಂಬಿಕೊಂಡಿರುವ ಹೂಳುಗಳನ್ನು ತೆಗೆಯಬೇಕೆಂದು ಸಭೆಯಲ್ಲಿ ತಿಳಿಸಿದರು.

ಶ್ರೀ ಬಿ.ಡಿ. ನಾಗರಾಜು ಮತ್ತು ಪಾಂಡಿಯನ್ ರವರು ಮಾತನಾಡಿ, ಒಣಕಸ ಸಂಗ್ರಹಿಸಲು ವಾರದಲ್ಲಿ ಎರಡು ಬಾರಿ ನಿಗಧಿಪಡಿಸಿರುತ್ತಾರೆ. ರಾಜೇಂದ್ರನಗರ ಪ್ರದೇಶದಲ್ಲಿ ಕಳೆದ ಶುಕ್ರವಾರ ಒಣಕಸ ಸಂಗ್ರಹಿಸಿರುವುದಿಲ್ಲ. ವಾರದಲ್ಲಿ ಎರಡು ಬಾರಿ ಮಾತ್ರ ಒಣ ಕಸ ಸಂಗ್ರಹಿಸುತ್ತಿರುವ ಕಾರಣ, ಒಂದು ಬಾರಿ ಗೈರು ಹಾಜರಾದರೆ, ಸ್ಥಳೀಯ ನಿವಾಸಿಗಳಿಗೆ ತೊಂದರೆಯಾಗುತ್ತದೆ. ಆದುದರಿಂದ ಕಸ ಸಂಗ್ರಹಣೆ ಸಮರ್ಪಕವಾಗಿ ಕೈಗೊಳ್ಳಬೇಕೆಂದು ಸಭೆಯಲ್ಲಿ ತಿಳಿಸಿದರು.

ಶ್ರೀ ಪಾಂಡಿಯನ್ ರವರು ಮಾತನಾಡಿ, 7ನೇ ಮುಖ್ಯರಸ್ತೆಯಲ್ಲಿರುವ ಅಳವಡಿಸಿರುವ ಸಿ.ಸಿ. ಕ್ಯಾಮೆರಾಗಳು ಕಾರ್ಯನಿರ್ವಹಿಸುತ್ತಿರುವುದಿಲ್ಲ. ಆದುದರಿಂದ ಹದಗೆಟ್ಟಿರುವ ಸಿ.ಸಿ. ಕ್ಯಾಮೆರಾಗಳನ್ನು ಸರಿಪಡಿಸಲು ಕ್ರಮ ಕೈಗೊಳ್ಳಬೇಕೆಂದು ಸಭೆಯ ಗಮನಕ್ಕೆ ತಂದರು. ಇದಕ್ಕೆ ಸಭೆಯಲ್ಲಿ ಹಾಜರಿದ್ದ ವಾರ್ಡ್‌ನ ಅಭಿಯಂತರರಾದ ಶ್ರೀ ಚಂದ್ರಶೇಖರ್ ರವರು ಮಾತನಾಡಿ, ಸರಿಪಡಿಸುವುದಾಗಿ ತಿಳಿಸಿದರು ಹಾಗೂ ಸಿ.ಸಿ. ಕ್ಯಾಮೆರಾ ಕಾಮಗಾರಿಯು ಟೆಂಡರ್ ಪ್ರಕ್ರಿಯೆಯಲ್ಲಿದ್ದು, ಟೆಂಡರ್ ಪ್ರಕ್ರಿಯೆಯು ಮುಗಿದು ಕಾರ್ಯಾದೇಶ ನೀಡಿದ ನಂತರ ಅವಶ್ಯವಿರುವ ಸ್ಥಳಗಳಲ್ಲಿ ಹಾಗೂ ನೀವು ಸೂಚಿಸಿರುವ ಸ್ಥಳಗಳು ಅತ್ಯವಶ್ಯಕವೆಂದು ಕಂಡುಬಂದಲ್ಲಿ ಸಿ.ಸಿ. ಕ್ಯಾಮೆರಾಗಳನ್ನು ಅಳವಡಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

ಶ್ರೀ ಕೆಂಪರಾಜು ರವರು ಮಾತನಾಡಿ, 7ನೇ ಬ್ಲಾಕ್ ಕೋರಮಂಗಲ ಪ್ರದೇಶದಲ್ಲಿನ ದೊನ್ನೆ ಬಿರಿಯಾನಿ ರಸ್ತೆಯಲ್ಲಿ ರಸ್ತೆಗಳ ಡಾಂಬರೀಕರಣದಿಂದಾಗಿ ಅಲ್ಲಿನ ರಸ್ತೆ ವಿಭಜಕಗಳ ಎತ್ತರವು ಕಡಿಮೆಯಾಗಿರುತ್ತದೆ. ವಾಹನ ಸವಾರರು ರಸ್ತೆ ನಿಯಮಗಳನ್ನು ಪಾಲಿಸದೆ ಹಾಗೂ ಕಡಿಮೆ ಎತ್ತರವಿರುವ ರಸ್ತೆ ವಿಭಜಗಳ ಮೇಲೆಯೇ ವಾಹನಗಳನ್ನು ಚಲಾಯಿಸುತ್ತಿರುವುದರಿಂದ ಅಪಾಯಗಳು ಉಂಟಾಗುವ ಸಂಭವವಿರುತ್ತದೆ. ಆದುದರಿಂದ ರಸ್ತೆ ವಿಭಜಕಗಳ ಎತ್ತರವನ್ನು ಹೆಚ್ಚಿಸಬೇಕೆಂದು ಸಭೆಯಲ್ಲಿ ತಿಳಿಸಿದರು.

ಕೊನೆಯದಾಗಿ ಸದಸ್ಯ ಕಾರ್ಯದರ್ಶಿಗಳು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳಿಗೆ ವಂದನೆಯನ್ನು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಮುಂದಿನ ಸಭೆಯಲ್ಲಿ ಪೂರ್ಣ ಮಾಹಿತಿಯನ್ನು ಒದಗಿಸಬೇಕೆಂದು ಕಾರ್ಯದರ್ಶಿ ಮತ್ತು ಇಲಾಖಾ ಅಧಿಕಾರಿಗಳಿಗೆ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ ಚಂದ್ರಶೇಖರ್ .ಪಿ)
ಸದಸ್ಯ ಕಾರ್ಯದರ್ಶಿ
ಹಾಗೂ ಕಿರಿಯ ಅಭಿಯಂತರರು,
ವಾರ್ಡ-147 ಆಡುಗೋಡಿ ವಿಭಾಗ

(ಶ್ರೀ ಬಸವರಾಜ್ ಕಬಾಡೆ)
ನೋಡಲ್ ಅಧಿಕಾರಿಗಳು
ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ-147, ಆಡುಗೋಡಿ



Scanned with CamScanner

01/03/2021





Scanned with CamScanner